ದಿನಾಂಕಃ *31-10-2025* ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರವಾಗಿ ಶ್ರೀ ಬಿ.ಎಸ್.ಎ. ವಕೀಲರಿಂದ:-</u>

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಸಹಿ ನನ್ನದು. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿರುತ್ತದೆ ಮತ್ತು ಸತ್ಯವಾಗಿರುತ್ತದೆ. ಅದನ್ನು ಓದಿ ತಿಳಿದುಕೊಂಡು ಅದಕ್ಕೆ ನನ್ನ ಸಹಿಯನ್ನು ಮಾಡಿರುತ್ತೇನೆ.

2. ದಿನಾಂಕ 23-01-2023 ರ ಅಂತಿಮ ಐತೀರ್ಪಿನ ತಿಳುವಳಿಕೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಶಾನೆ ಪಿ.**1** ಎಂದು ಮತ್ತು ದಿಃ *18-11-2023* ರಂದು ಸಾಕ್ಷಿಯು ಭೂಸ್ವಾಧೀನಾಧಿಕಾರಿಗಳಿಗೆ ಕಲಂ *64* ರಡಿಯಲ್ಲಿ ಸಲ್ಲಿಸಿರುವ ತಕರಾರು ಅರ್ಜಿಯ ಪ್ರತಿಯನ್ನು ಹಾಜರು ಪಡಿಸಿದ್ದು, ಅದನ್ನು ನಿಶಾನೆ ಪಿ.**2** ಎಂದು ಗುರುತಿಸಲಾಯಿತು. ನನ್ನ ಪ್ರಮಾಣ ಪತ್ರದಲ್ಲಿ ತಿಳಿಸಿದ ಕಾರಣಗಳನ್ನು ಮತ್ತು ನಾನು ಹಾಜರುಪಡಿಸಿದ ದಾಖಲೆಯನ್ನು ಪರಿಗಣಿಸಿ ನನ್ನ ಅರ್ಜಿಯನ್ನು ಪುರಸ್ಕರಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

<u>ಪಾಟೀ ಸವಾಲುಃ *3* ನೇ ಎದುರುದಾರರ ಪರವಾಗಿ ಶ್ರೀ ಕೆ.ಎಂ.ಜೆ. ವಕೀಲರಿಂದ *:-*</u>

***3.*** ಗರುಗದಹಳ್ಳಿ ಗ್ರಾಮದ ಸರ್ವೆ ನಂಬರು ***252*** ರಲ್ಲಿ ನಿಮಗೆ ಸೇರಿದ ***23*** ಗುಂಟೆ ಖುಷ್ಕಿ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದರೆ ಸರಿ. ಅದಕ್ಕೆ ಪರಿಹಾರವಾಗಿ ಭೂಸ್ವಾಧೀನಾಧಿಕಾರಿಗಳು ನಿಮಗೆ ರೂ.***5,56,698/-*** ಹಣವನ್ನು ನೀಡಿದ್ದಾರೆ ಎಂದರೆ ಸರಿ. ಸದರಿ ಹಣವನ್ನು ಸ್ವೀಕರಿಸುವ ಸಮಯದಲ್ಲಿ ನೀವು ಅದು ಕಡಿಮೆಯಾಗಿದೆ ಎಂದು ನೀವು ವಿರೋಧ ವ್ಯಕ್ತಪಡಿಸಿಲ್ಲ ಎಂದರೆ ಸರಿಯಲ್ಲ. ನೀವು ಹೇಳಿದಂತೆ ಆ ರೀತಿ ಯಾವುದೇ ವಿರೋಧ ವ್ಯಕ್ತಪಡಿಸಿಲ್ಲ ಎಂದರೆ ಸರಿಯಲ್ಲ.

*4.* ಸ್ವಾಧೀನಗೊಂಡ ಸಮಯದಲ್ಲಿ ನಿಮ್ಮ ಜಮೀನಿಗೆ ಪ್ರತಿ ಗುಂಟೆಗೆ *2* ರಿಂದ *3* ಲಕ್ಷ ರೂಪಾಯಿ ಬೆಲೆ ಬಾಳುತ್ತಿತ್ತು ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಅದನ್ನು ನಿರೂಪಿಸಲು ನೀವು ನ್ಯಾಯಾಲಯಕ್ಕೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಿಮ್ಮ ಮುಖ್ಯ ವಿಚಾರಣೆಯ ಪ್ರಮಾಣಪತ್ರದ *2* ನೇ ಪುಟದ ಮೊದಲನೇ ಖಂಡಿಕೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳು ಸುಳ್ಳು ಎಂದರೆ ಸರಿಯಲ್ಲ. ನೀವು ಕಾಲಪರಿಮಿತಿಯೊಳಗೆ ಭೂಸ್ವಾಧೀನ ಕಾಯ್ದೆ ಕಲಂ *64* ರಡಿಯಲ್ಲಿ ಅರ್ಜಿಯನ್ನು ಸಲ್ಲಿಸದೇ ಇರುವ ಕಾರಣ ನೀವು ಸದರಿ ಅರ್ಜಿ ಮತ್ತು ಕಡತವನ್ನು *1* ನೇ ಎದುರುದಾರರಿಂದ ತರಿಸಿಕೊಳ್ಳಬೇಕು ಎಂದು ಕೋರಿ ಸಲ್ಲಿಸಿರುವ ಪ್ರಸ್ತುತ ಅರ್ಜಿ ಕಾನೂನಿನ ಪ್ರಕಾರ ಊರ್ಜಿತವಲ್ಲ ಎಂದರೆ ಸರಿಯಲ್ಲ. ನೀವು ಪ್ರಸ್ತುತ ಅರ್ಜಿಯನ್ನು ಸಹ ಕಾಯ್ದೆಯಲ್ಲಿ ನಿಗದಿಪಡಿಸಿರುವ ಪರಿಮಿತಿಯೊಳಗೆ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ಆ ಕಾರಣಕ್ಕೆ ನೀವು ಪ್ರಸ್ತುತ ಅರ್ಜಿಯಲ್ಲಿ ಕೋರಿರುವ ಪರಿಹಾರಕ್ಕೆ ಅರ್ಹರಲ್ಲ ಎಂದರೆ ಸರಿಯಲ್ಲ.

ಪಾಟೀ ಸವಾಲು: ***1*** ಮತ್ತು ***2*** ನೇ ಎದುರುದಾರರ ಪರವಾಗಿ ಶ್ರೀ ಸಿ ಎಸ್ ಸರ್ಕಾರಿ ವಕೀಲರ ಪರವಾಗಿ ಶ್ರೀ ಎನ್.ಹೆಚ್.ಸಿ. ವಕೀಲರಿಂದ:

**(3** ನೇ ಎದುರುದಾರರ ಪರ ವಕೀಲರು ಮಾಡಿದ ಮೇಲಿನ ಪಾಟೀ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ**).**

ಮರು ವಿಚಾರಣೆ: ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.